# *Form No.4.*

# *Deposition Sheet( R.P.52)*

ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ
ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.

**MVC 705/2024**

**PW1**

| | | |
|---|---|---|
| ಸಾಕ್ಷಿಯ ಹೆಸರು | ಃ | ಸಂದೇಶ್ |
| ತಂದೆ ಹೆಸರು | ಃ | ಶಿವ ನ್ಯಾಕ |
| ಪ್ರಾಯ | ಃ | 34 ವರ್ಷ |
| ಉದ್ಯೋಗ | ಃ | ಚಾಲಕ |
| ವಾಸ | ಃ | ವರಂಗ ಗ್ರಾಮ, ಕಾರ್ಕಳ |

ದಿನಾಂಕ **: 07.03.2026** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎನ್.ವಿ.ಪಿ. ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಕೇಸಿನ ಅರ್ಜಿದಾರ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ - 2 ಎಂದು, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 3 ಎಂದು, ಕಚ್ಚಾ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 4 ಎಂದು, ಐಎಮ್‌ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 5 ಎಂದು, ಕಲಂ 160 ರ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 6 ಎಂದು, ನನ್ನ ಆಧಾರ್ ಕಾರ್ಡ್‌ನ್ನು ಮತ್ತು ಅದರ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದೇನೆ. (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು). ಆಧಾರ್ ಕಾರ್ಡಿನ ನೋಟರೀಕೃತ ನಕಲನ್ನು ನಿಪಿ - 7 ಎಂದು, ಪೋಲೀಸರು ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 8 ಎಂದು, ಸದರಿ ವಾಹನದ ಮಾಲೀಕರಿಗೆ ಪೋಲೀಸರು ಕಲಂ 133 ರಡಿಯಲ್ಲಿ ನೀಡಿದ ನೋಟೀಸಿನ ದೃಢೀಕೃತ ನಕಲನ್ನು ಹಾಗೂ ಅದಕ್ಕೆ ನೀಡಿರುವ ಪ್ರತ್ಯುತ್ತರವನ್ನು ಹಾಜರುಪಡಿಸಿದ್ದು, ಒಟ್ಟಾಗಿ ನಿಪಿ - 9 ಎಂದು, ನನ್ನ ವಾಹನದ ಆರ್.ಸಿ.ಯ ನೋಟರೀಕೃತ ಪ್ರತಿಯನ್ನು ನಿಪಿ - 10 ಎಂದು, ನನ್ನ ಡಿಎಲ್ ನ ನೋಟರೀಕೃತ ಪ್ರತಿಯನ್ನು ನಿಪಿ - 11 ಎಂದು (ನಿಪಿ - 10 ಮತ್ತು ನಿಪಿ - 11 ರ ಮೂಲ ಪ್ರತಿಗಳನ್ನು ಪರಿಶೀಲಿಸಿ

ಹಿಂತಿರುಗಿಸಲಾಯಿತು), ವಾಹನ ಸರ್ವೆ ವರದಿಯನ್ನು ನಿಪಿ - 12 ಎಂದು, 4 ಪುಟಗಳ ರಶೀದಿಯನ್ನು ನಿಪಿ - 13 ಎಂದು, 6 ಪುಟಗಳ ಇನ್ವೈಸ್ ಮತ್ತು ಎಸ್ಟಿಮೇಟನ್ನು ಒಟ್ಟಾಗಿ ನಿಪಿ - 14 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕಾಗಿ ಪ್ರಾರ್ಥನೆ.

ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರು ಹಾಜರಿರುವುದಿಲ್ಲ ಹಾಗೂ ತಕರಾರು ಸಲ್ಲಿಸದ ಕಾರಣ ಪಾಟೀ ಸವಾಲು ಇರುವುದಿಲ್ಲ ಎಂದು ಪರಿಗಣಿಸಲಾಯಿತು.

ಮರು ವಿಚಾರಣೆಃ ಇಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ.